# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಕೆ.ಆರ್.ಪುರ ಉಪವಲಯ, ಮಹದೇವಪುರ ವಲಯ, ಬೆಂಗಳೂರು

ಸಂಖ್ಯೆ:ಬಿಬಿಎಂಪಿ/ಸ.ಕಾ.ಅ/ ಕೆ.ಆರ್.ಪುರ/ಉ.ವಿ/ಪಿಆರ್/ /2022-23 ದಿನಾಂಕ:16-12-2022

ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ: 21-09-2020 ರಂತೆ ದಿನಾಂಕ: 16-12-2022 ರಂದು ಹೊಸ ವಾರ್ಡ್ ಸಂಖ್ಯೆ:87 ಮೇಡಹಳ್ಳಿ ವಾರ್ಡ್ ಕಮಿಟಿ ಸಭೆಯನ್ನು ವಾರ್ಡ್ ಕಛೇರಿಯಲ್ಲಿ ನೋಡಲ್ ಅಧಿಕಾರಿಗಳು ಹಾಗೂ ಶ್ರೀ.ಕೇಶವ್, ಸಹಾಯಕ ಅಭಿಯಂತರರು ರವರ ಅಧ್ಯಕ್ಷತೆಯಲ್ಲಿ ನಡೆದಿರುವ ಸಭೆಯ ನಡುವಳಿಗಳು:

### "ಸಭೆಯಲ್ಲಿ ಚರ್ಚಿಸಲಾದ ವಿಷಯಗಳು"

| ಕ್ರಮ ಸಂಖ್ಯೆ | ವಿಷಯ | ತೀರ್ಮಾನ |
|---|---|---|
| 1. | ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಅಗೆದಿರುವ ರಸ್ತೆಗಳನ್ನು ಪುನಶ್ಚೇತಗೊಳಿಸುವ ಬಗ್ಗೆ. | ಬಿ.ಡಬ್ಲ್ಯೂಎಸ್.ಎಸ್.ಬಿ ವತಿಯಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗಾಗಿ ಒಳಚರಂಡಿ ಸಂಪರ್ಕ ಮತ್ತು ಕುಡಿಯುವ ನೀರಿನ ಸಮರ್ಪಕ ಸರಬರಾಜುಗಾಗಿ ಕೈಗೊಂಡಿರುವ ಅನೇಕ ಕಾಮಗಾರಿಗಳನ್ನು ಕೈಗೊಂಡು ಅಗೆದಿರುವ ರಸ್ತೆಗಳನ್ನು ಪುನಶ್ಚೇತಗೊಳಿಸದೇ ಅನೇಕ ಕಡೆ ಹಾಗೆಯೇ ಬಿಟ್ಟಿರುವುದು ಕಂಡು ಬಂದಿರುತ್ತದೆ. ಇದರಿಂದ ವಾರ್ಡ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಸಮಸ್ಯೆಯಾಗುತ್ತಿದ್ದು, ಆದರಿಂದ ರಸ್ತೆಯನ್ನು ಪುನಶ್ಚೇತಗೊಳಿಸಲು ಹಾಜರಿದ್ದ ಸದರಿ ಅಧಿಕಾರಿಗಳಿಗೆ ತಿಳಿಸಿದರು.<br><br>ಸನ್‌ಶೈನ್ ಬಡಾವಣೆಯ 3ನೇ ಕ್ರಾಸ್‌ನಲ್ಲಿ ಬಿ.ಡಬ್ಲ್ಯೂಎಸ್.ಎಸ್.ಬಿ ರವರು ರಸ್ತೆಯನ್ನು ಅಗೆದು ಪುನಶ್ಚೇತಗೊಳಿಸದೆ ಹಾಗೆ ಬಿಟ್ಟಿರುವುದರಿಂದ ,ವಾಹನ ಚಾಲಕರಿಗೆ ಹಾಗೂ ತೊಂದರೆ ಉಂಟಾಗುತ್ತಿದ್ದು,ಕೂಡಲೇ ಸಮಸ್ಯೆಯನ್ನು ಪರಿಹರಿಸುವಂತೆ ಸಭೆಯಲ್ಲಿ ತಿಳಿಸಿದರು. |
| 2. | ಮರದ ಕೊಂಬೆಗಳನ್ನು ತೆರವುಗೊಳಿಸವಂತೆ. | ಮೇಡಹಳ್ಳಿ ವ್ಯಾಪ್ತಿಯ ಮುಕ್ತಿ ವಿನಾಯಕ ಬಡಾವಣೆಯ 1ನೇ ಅಡ್ಡರಸ್ತೆಯಲ್ಲಿ ಕೇಬಲ್‌ಗಳ ನಡುವೆ ಮರದ ರೆಂಬೆಗಳು ಹಾದು ಹೋಗುತ್ತಿದ್ದು, ಸಮಸ್ಯೆಯಾಗುವ ಸಾಧ್ಯತೆಯಿದ್ದು ಕೂಡಲೇ ಮರದ ಕೊಂಬೆಗಳನ್ನು ತೆರವುಗೊಳಿಸವಂತೆ ಸಭೆಯಲ್ಲಿ ತಿಳಿಸಿದರು.ಇದಕ್ಕೆ ಹಾಜರಿದ್ದ ಅರಣ್ಯಾಧಿಕಾರಿಗಳು ಕೂಡಲೇ ಸಮಸ್ಯೆಯನ್ನು ಬಗೆಹರಿಸುವುದಾಗಿ ತಿಳಿಸಿದರು. |

| | | |
|---|---|---|
| 3. | ವಾರ್ಡ ವ್ಯಾಪ್ತಿಯಲ್ಲಿ ನೀರಿನ ಸರಬರಾಜು ಸೌಲಭ್ಯ ಒದಗಿಸುವ ಬಗ್ಗೆ. | ವಾರ್ಡ ವ್ಯಾಪ್ತಿಯಲ್ಲಿ ನೀರಿನ ಸರಬರಾಜು ಸೌಲಭ್ಯವನ್ನು ಒದಗಿಸಲು ಬಿ.ಡಬ್ಲ್ಯು.ಎಸ್.ಎಸ್.ಬಿ ಯ ಅಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಲಾಯಿತು. ಹಾಗೂ ಮುಂದಿನ ದಿನಗಳಲ್ಲಿ ಯಾವುದೇ ತೊಂದರೆಗಳು ಬರದಂತೆ ನೋಡಿಕೊಳ್ಳಲು ತಿಳಿಸಲಾಯಿತು.<br><br>ಇಡನ್ ಗಾರ್ಡನ್ ಬಡಾವಣೆ, ಮುಕ್ತಿ ವಿನಾಯಕ ಬಡಾವಣೆ, ಮತ್ತು ಆಶ್ರಯ ಬಡಾವಣೆ ಗಳಲ್ಲಿ ನೀರಿನ ಸರಬರಾಜು ಸೌಲಭ್ಯವನ್ನು ಒದಗಿಸುವಂತೆ ಕೋರಿದರು.ಇದಕ್ಕೆ ಸಭೆಗೆ ಹಾಜರಿದ್ದ ಬಿ.ಡಬ್ಲ್ಯು.ಎಸ್.ಎಸ್.ಬಿ ಇಲಾಖೆಯ ಅಧಿಕಾರಿಗಳು ಈ ಸಮಸ್ಯೆಗೆ ಸೂಕ್ತ ಕ್ರಮವನ್ನು ತೆಗೆದುಕೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು. |
| 4. | ಮ್ಯಾನ್ ಹೋಲ್ ಕುರಿತು. | ಮೇಡಹಳ್ಳಿಯ ಸನ್‌ಶೈನ್ ಬಡಾವಣೆಯ 1ನೇ ಅಡ್ಡರಸ್ತೆಯಲ್ಲಿ ಮ್ಯಾನ್ ಹೋಲ್ ತುಂಬಿ ಹರಿಯುತ್ತಿದ್ದು, ಸಾರ್ವಜನಿಕರಿಗೆ ಹಾಗೂ ವಾಹನ ಚಾಲಕರಿಗೆ ಸಮಸ್ಯೆ ಉಂಟಾಗುತ್ತಿದ್ದು, ಮುಂದಿನ ಕ್ರಮಕ್ಕಾಗಿ ಬಿ.ಡಬ್ಲ್ಯು.ಎಸ್.ಎಸ್. ಬಿ ಯ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದರು. |
| 5. | ಸೈನ್ ಬೋರ್ಡ್ ಅಳವಡಿಸುವ ಬಗ್ಗೆ. | ಮೇಡಹಳ್ಳಿ ವ್ಯಾಪಿಯ ಸುಭಾಷ್ ನಗರದಲ್ಲಿ ಸೈನ್ ಬೋರ್ಡ್‌ಗಳನ್ನು ಅಳವಡಿಸಿಕೊಡುವಂತೆ ಕೋರಿದರು.ಇದಕ್ಕೆ ಸಭೆಯಲ್ಲಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ಸೈನ್ ಬೋರ್ಡ್‌ಗಳನ್ನು ನಿಯಮಾನುಸಾರವಾಗಿ ಅಳವಡಿಸಿಕೊಡಲಾಗುವುದೆಂದು ತಿಳಿಸಿದರು. |

ವಾರ್ಡ್ ಕಮಿಟಿ ನೋಡಲ್ ಅಧಿಕಾರಿ ಮತ್ತು ಕಾರ್ಯದರ್ಶಿಗಳು, ನೌಕರರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಈ ಮೇಲ್ಕಂಡಂತೆ ತಿಳಿಸಿರುವ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ ಹಾಗೂ ನಿರ್ಣಯಗಳಂತೆ ಮೇಡಹಳ್ಳಿ ವಾರ್ಡ್ ನಂ:87 ವ್ಯಾಪ್ತಿಯಲ್ಲಿ ಕೆಲಸ ಕಾರ್ಯಗಳನ್ನು ಆದ್ಯತೆ ಮೇರೆಗೆ ನಿರ್ವಹಿಸಲು ನಿರ್ಣಯಿಸಲಾಯಿತು.

ಮೇಡಹಳ್ಳಿ ವಾರ್ಡ ನಂ: 87 ರ ವಾರ್ಡ್ ಕಮಿಟಿಯ ಕಾರ್ಯದರ್ಶಿಗಳಾದ ಸಹಾಯಕ ಅಭಿಯಂತರರು, ರವರು ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಕಾರ್ಯನಿರ್ವಹಿಸಲು ಕೋರುತ್ತಾ, ವಂದನಾರ್ಪಣೆಯನ್ನು ಸಲ್ಲಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ನಂ: 87

**ಪ್ರತಿಯನ್ನು**

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ ಮಹದೇವಪುರ ವಲಯ,ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು, ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಡಿ.ಹೆಚ್.ಓ ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಸೂಕ್ತ ಮಾಹಿತಿ/ಕ್ರಮಕ್ಕಾಗಿ ಸಲ್ಲಿಸಿದೆ.
4. ಎಲ್ಲಾ ಅಧಿಕಾರಿ ಸಿಬ್ಬಂದಿಗಳ ಕ್ರಮಕ್ಕಾಗಿ.
5. ಎಲ್ಲಾ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.